RNU AIR DHARWAD

**MARCH 19. 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು:**

- **ಅಭಿವೃದ್ಧಿ, ಬಡವರ ಕಲ್ಯಾಣ ಮತ್ತು ಸಮರ್ಥ ಭಾರತ ನಿರ್ಮಾಣ ಬಿಜೆಪಿಯ ಸಂಕಲ್ಪ ಪ್ರಧಾನಮಂತ್ರಿ ನರೇಂದ್ರ ಮೋದಿ.**

- **ಬೆಂಗಳೂರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕಟ್ಟುನಿಟ್ಟಿನ ಕ್ರಮ – ಮುಖ್ಯಮಂತ್ರಿ ಸಿದ್ಧರಾಮಯ್ಯ.**

- **ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಯ ಸಿಇಟಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ.**

- **ಜಿಲ್ಲಾ ಹಂತದಲ್ಲಿ ಲೋಕಸಭಾ ಚುನಾವಣೆಗೆ ಸಿದ್ಧತೆ**

<><><>

**ವಾರ್ತೆಗಳ ವಿವರ...**

<><><>

**ಅಭಿವೃದ್ಧಿ, ಬಡವರ ಕಲ್ಯಾಣ ಮತ್ತು ಸಮರ್ಥ ಭಾರತ ನಿರ್ಮಾಣ** ಬಿಜೆಪಿಯ ಸಂಕಲ್ಪವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಶಿವಮೊಗ್ಗದಲ್ಲಿ ನಿನ್ನೆ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಕನ್ನಡದಲ್ಲಿ ಭಾ ಣ ಆರಂಭಿಸಿದ ಅವರು; ಕಾಂಗ್ರೆಸ್ ಪಕ್ಷ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದು, ತನ್ನ ಅಸಾಮರ್ಥ್ಯಕ್ಕೆ ಕೇಂದ್ರ ಸರ್ಕಾರವನ್ನು ಹೊಣೆ ಮಾಡುವ ಪರಿಪಾಠ ಅಳವಡಿಸಿಕೊಂಡಿದೆ. ಕರ್ನಾಟಕದಲ್ಲೂ ಕಾಂಗ್ರೆಸ್ ಸರ್ಕಾರ ಇದನ್ನೇ ಮಾಡುತ್ತಿದೆ. ಭ್ರ ್ಟಾಚಾರದಲ್ಲಿ ನಿರತವಾಗಿದ್ದು, ಆಡಳಿತ ನಡೆಸಲು ಹಣವಿಲ್ಲದಂತಾಗಿದೆ. ಕಾಂಗ್ರೆಸ್ ನಡೆಸುತ್ತಿರುವ ಈ ಭ್ರ ್ಟಾಚಾರದ ಭಾರವನ್ನು ಜನ ಹೊರಬೇಕಾಗಿ ಬಂದಿದೆ ಎಂದು ಹೇಳಿದರು. ದೇಶಾದ್ಯಂತ 400ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಎನ್.ಡಿ.ಎ. ಗೆಲ್ಲಬೇಕು. ಈ ಮಿ ನ್‌ನಲ್ಲಿ ಕರ್ನಾಟಕದ ಮತದಾರರ ಕೊಡುಗೆ ಮಹತ್ವದಾಗಿದ್ದು, ವಿಕಸಿತ ಕರ್ನಾಟಕ, ವಿಕಸಿತ ಭಾರತ ನಿರ್ಮಾಣಕ್ಕಾಗಿ ಕಮಲವನ್ನು ಅರಳಿಸಬೇಕು ಎಂದು ಹೇಳಿದರು.

<><><>

**ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಾತನಾಡಿ,** ಪ್ರಧಾನಿ ನರೇಂದ್ರ ಮೋದಿ ಸರ್ಕಾರ ರೈತರ ಕೃಷಿ ಚಟುವಟಿಕೆಗೆ ಕಿಸಾನ್ ಸಮ್ಮಾನ್ ನಿಧಿಯಡಿ 6 ಸಾವಿರ ರೂಪಾಯಿ ನೆರವು ನೀಡುತ್ತಿದ್ದು, ರಾಜ್ಯದ ಬಿಜೆಪಿ ಸರ್ಕಾರ ಕೂಡ 4 ಸಾವಿರ ರೂಪಾಯಿ ನೆರವು ಒದಗಿಸುತ್ತಿತ್ತು. ಆದರೆ, ಹಾಲಿ ಸರ್ಕಾರ ಯೋಜನೆಯನ್ನು ಸ್ಥಗಿತಗೊಳಿಸಿದೆ ಎಂದರು.

<><><>

**ಬೆಂಗಳೂರು ನಗರದಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯಲ್ಲೂ** ಸಮಸ್ಯೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ಈ ಕುರಿತು ಸಭೆ ನಡೆಸಿದ ಅವರು, ಕುಡಿಯುವ ನೀರು ಒದಗಿಸಲು ಹಣದ ಕೊರತೆ ಇಲ್ಲ. ನೀರಿನ ಸಮಸ್ಯೆ ಕುರಿತು ಸಾರ್ವಜನಿಕರ ಕುಂದುಕೊರತೆ ಆಲಿಸಲು ನಿಯಂತ್ರಣ ಕೊಠಡಿಗಳ ಸಂಖ್ಯೆ ಹೆಚ್ಚಿಸುವ ಜೊತೆಗೆ ತಕ್ಷಣವೇ ಸಮಸ್ಯೆಗೆ ಪರಿಹಾರ ದೊರಕಿಸುವ ಪ್ರಯತ್ನಗಳನ್ನು ಅಧಿಕಾರಿಗಳು ಮಾಡಬೇಕು. ಭವಿಷ್ಯದಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಯನ್ನು ನಿಭಾಯಿಸಲು ತಜ್ಞರ ಸಮಿತಿ ರಚಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕಾವೇರಿ ಜಲಾಶಯದಲ್ಲಿ ನೀರಿನ ಸಂಗ್ರಹವಿದ್ದು, ಜೂನ್ ಅಂತ್ಯದವರೆಗೆ ಯಾವುದೇ ಸಮಸ್ಯೆ ಇಲ್ಲ. ಕೆ.ಆರ್.ಎಸ್.ನಲ್ಲಿ 11.02 ಟಿ.ಎಂ.ಸಿ., ಕಬಿನಿಯಲ್ಲಿ 9.02 ಟಿ.ಎಂ.ಸಿ. ನೀರು ಲಭ್ಯ ಇದೆ. ಆದರೆ ಕುಡಿಯುವ ನೀರು ಪೂರೈಸುವ 6 ಸಾವಿರದ 900 ಕೊಳವೆ ಬಾವಿಗಳು ಬತ್ತಿದ್ದು, ಇದರಿಂದ ನೀರಿನ ಅಭಾವ ಸೃಷ್ಟಿಯಾಗಿದೆ. 313 ಕೊಳವೆ ಬಾವಿಗಳನ್ನು ಹೊಸದಾಗಿ ಕೊರೆಸುತ್ತಿದ್ದು, 1 ಸಾವಿರದ 200 ಕೊಳವೆ ಬಾವಿಗಳಿಗೆ ಮರುಜೀವ ನೀಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

<><><>

**ಲೋಕಸಭಾ ಚುನಾವಣೆಗೆ ಕಾಂಗ್ರೆಸ್‌ನಲ್ಲಿ ಅಭ್ಯರ್ಥಿಗಳ ಕೊರತೆ ಇಲ್ಲ ಎಂದು** ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ನಿನ್ನೆ ಹೇಳಿದ್ದಾರೆ. ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗರಿಷ್ಠ ಸಂಖ್ಯೆಯಲ್ಲಿ ಆಯ್ಕೆಯಾಗಲಿದ್ದಾರೆ. ವಾಸ್ತವವಾಗಿ ಬಿಜೆಪಿಯಲ್ಲಿ ಅಭ್ಯರ್ಥಿಗಳ ಕೊರತೆ ಇದೆ. ಕಾಂಗ್ರೆಸ್ ಪಕ್ಷಕ್ಕೆ ಉತ್ತಮ ಜನಬೆಂಬಲ ವ್ಯಕ್ತವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

<><><>

**ಲೋಕಸಭಾ ಚುನಾವಣೆಗೆ ರಾಜ್ಯದಿಂದ ಬಿಜೆಪಿ, ಇದುವರೆಗೆ 20** ಅಭ್ಯರ್ಥಿಗಳ ಹೆಸರುಗಳನ್ನು ಪ್ರಕಟಿಸಿದೆ. ಜೆಡಿಎಸ್ ಮಿತ್ರಪಕ್ಷಕ್ಕೆ ಮೂರು ಸ್ಥಾನಗಳನ್ನು ನೀಡಲು ಬಿಜೆಪಿ ನಿರ್ಧರಿಸಿದೆ. ಉಳಿದ ಐದು ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಬಿರುಸಿನಿಂದ ನಡೆಯುತ್ತಿದೆ. ಮತ್ತೊಂದೆಡೆ, ಕಾಂಗ್ರೆಸ್ ಪಕ್ಷ, ಇದುವರೆಗೆ 7 ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳ ಹೆಸರುಗಳನ್ನು ಪ್ರಕಟಿಸಿದೆ. ಉಳಿದ ಕ್ಷೇತ್ರಗಳಿಗೆ ಅಭ್ಯರ್ಥಿಗಳ ನಿರ್ಧಾರ ಪ್ರಕ್ರಿಯೆ ಪ್ರಗತಿಯಲ್ಲಿದೆ.

<><><>

**ಲೋಕಸಭೆ ಚುನಾವಣೆ ಎದುರಿಸಲು ರಾಜ್ಯ ಸಜ್ಜಾಗಿದ್ದು, ಸುಮಾರು ಐದೂವರೆ ಕೋಟಿ** ಮತದಾರರು 28 ಸಂಸದರನ್ನು ಆಯ್ಕೆ ಮಾಡಲಿದ್ದಾರೆ. ಅದಕ್ಕಾಗಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ ಎಂದು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ. ರಾಜ್ಯದ 28 ಕ್ಷೇತ್ರಗಳನ್ನು ಎರಡು ಭಾಗಗಳಾಗಿ ವಿಭಜಿಸಲಾಗಿದ್ದು, ತಲಾ 14 ಲೋಕಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ 26 ಮತ್ತು ಮೇ 7 ರಂದು ಚುನಾವಣೆ ನಡೆಯಲಿದೆ. ಕರ್ನಾಟಕದಲ್ಲಿ 58 ಸಾವಿರದ 834 ಮತಗಟ್ಟೆಗಳಿದ್ದು, 5 ಕೋಟಿಯ 42 ಲಕ್ಷ

ಮತದಾರರು ಮತ ಚಲಾಯಿಸಲಿದ್ದಾರೆ. ದೇಶದಲ್ಲಿ 85 ವರ್ಷ ಮೀರಿದ ವಯೋಮಾನದ 81 ಲಕ್ಷಕ್ಕೂ ಅಧಿಕ ಮತದಾರರಿದ್ದು, ಅವರಿಗಾಗಿ 'ಮನೆಯಿಂದಲೇ ಮತದಾನ' ಸೌಲಭ್ಯವನ್ನು ಚುನಾವಣಾ ಆಯೋಗ ಕಲ್ಪಿಸಿದೆ. ಜೊತೆಗೆ ಶೇಕಡ 40ಕ್ಕಿಂತಲೂ ಅಧಿಕ ಅಂಗವೈಕಲ್ಯ ಹೊಂದಿರುವ ವ್ಯಕ್ತಿಗಳಿಗೂ ಈ ಅವಕಾಶ ಕಲ್ಪಿಸಲಾಗಿದೆ ಎಂದು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಹೇಳಿದೆ.

<><><>

**ಚುನಾವಣೆ ಸಂದರ್ಭದಲ್ಲಿ ಬ್ಯಾಂಕುಗಳು ಹಾಗೂ ಎ.ಟಿ.ಎಂ.ಗಳಿಂದ ಪಡೆದ ನಗದು** ಹಣವನ್ನು ಸೂಕ್ತ ಭದ್ರತೆ ಹಾಗೂ ದಾಖಲಾತಿಗಳೊಂದಿಗೆ ಕೊಂಡೊಯ್ಯುವಂತೆ ಚುನಾವಣಾ ವಿಭಾಗದ ವಿಶೇಷ ಆಯುಕ್ತ ಸೆಲ್ವಮಣಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಲೋಕಸಭಾ ಚುನಾವಣೆ ಕುರಿತು ಬ್ಯಾಂಕ್ ನೋಡಲ್ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಒಂದು ಲಕ್ಷ ರೂಪಾಯಿಗಿಂತ ಹೆಚ್ಚಿನ ನಗದು ಹಿಂಪಡೆಯುವಿಕೆ ಸಂಶಯಾಸ್ಪದ ವಹಿವಾಟಿಗೆ ಕಾರಣವಾಗುತ್ತದೆ ಎಂದರು. ಠೇವಣಿ ಮತ್ತು ಹಿಂಪಡೆಯುವಿಕೆಯ ಮೊತ್ತ 10 ಲಕ್ಷ ರೂಪಾಯಿಗಿಂತ ಹೆಚ್ಚಿದ್ದರೆ, ಅಂತಹ ಮಾಹಿತಿಯನ್ನು ಆದಾಯ ತೆರಿಗೆ ಕಾನೂನುಗಳ ಅಡಿಯಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು. ಯಾವುದೇ ಪೂರ್ವ ನಿರ್ದೇಶನವಿಲ್ಲದೇ ಚುನಾವಣೆ ಪ್ರಕ್ರಿಯೆ ಸಮಯದಲ್ಲಿ ಹಲವಾರು ವ್ಯಕ್ತಿಗಳ ಖಾತೆಗಳಿಗೆ ವರ್ಗಾವಣೆ ಮಾಡುವ ಬಗ್ಗೆಯೂ ಪರಿಶೀಲನೆ ನಡೆಸುವುದಾಗಿ ಅವರು ಹೇಳಿದ್ದಾರೆ. ಚುನಾವಣಾ ಸಂದರ್ಭದಲ್ಲಿ ಅನುಮಾನಸ್ಪದ ವಹಿವಾಟುಗಳು ಕಂಡಬಂದಲ್ಲಿ ಕೂಡಲೇ ಚುನಾವಣಾ ವಿಭಾಗದ ಗಮನಕ್ಕೆ ತರಬೇಕು.ಸಂಶಯಕ್ಕೆ ಕಾರಣವಾಗುವ ವಹಿವಾಟುಗಳು ನಡೆದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ವೃತ್ತಿಪರ ಕೋರ್ಸುಗಳ ಪ್ರವೇಶಾತಿಗೆ ಬರುವ ಏಪ್ರಿಲ್ 18 ಮತ್ತು 19ರಂದು** ನಡೆಸಲಾಗುವ ಸಿಇಟಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲಾಗಿದೆ. ಎಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಇತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಮಾರ್ಚ್ 20ರವರೆಗೆ ಅರ್ಜಿ ಸಲ್ಲಿಸಬಹುದು. ಶುಲ್ಕ ಪಾವತಿಸಲು ಮಾರ್ಚ್ 21 ಕೊನೆ ದಿನ. ಮತ್ತೊಮ್ಮೆ ವಿಸ್ತರಣೆ ಇರುವುದಿಲ್ಲ. ಇದೇ ಕೊನೆಯ ಅವಕಾಶ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ತಿಳಿಸಿದೆ.

<><><>

**ಗದಗ ಜಿಲ್ಲೆಯಲ್ಲಿ ಮೇ7 ರಂದು ಜರುಗುವ ಲೋಕಸಭಾ ಚುನಾವಣೆಯಲ್ಲಿ** ಚುನಾವಣಾ ಆಯೋಗದ ಮಾರ್ಗಸೂಚಿಯನ್ನು ರಾಜಕೀಯ ಪಕ್ಷಗಳು ಕಡ್ಡಾಯವಾಗಿ ಪಾಲನೆ ಮಾಡಬೇಕು ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಹೇಳಿದ್ದಾರೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯಲ್ಲಿ ನಿನ್ನೆ ಮಾತನಾಡಿದ ಅವರು, ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಚುನಾವಣಾ ಆಯೋಗದ ಮಾರ್ಗಸೂಚಿ ಪಾಲಿಸುವುದು ಕಡ್ಡಾಯವಾಗಿದೆ ಎಂದರು. ತಾತ್ಕಾಲಿಕವಾಗಿ ಅಗತ್ಯವಿದ್ದಲ್ಲಿ ಪಕ್ಷದ ಕಚೇರಿ

ಮಾಡಬಹುದು ಹಾಗೂ ಪಕ್ಷದ ಚಿನ್ಹೆ ಹೊಂದಿರುವ ಬಟ್ಟೆ ಧರಿಸಿ ಬರುವ ಹಾಗಿಲ್ಲ ಮತ್ತು ಪ್ರಚಾರಕ್ಕಾಗಿ ಪ್ರಾಣಿಗಳನ್ನು ಹಾಗೂ ಮಕ್ಕಳ ಬಳಕೆ ಮಾಡಬಾರದು ಹಾಗೂ ಪೊಲಿಂಗ ಸ್ಟೇ ನ್ ಒಳಗಡೆ ಮತ್ತು ಧಾರ್ಮಿಕ ಸ್ಥಳಗಳಲ್ಲಿ ಸಭೆ ಪ್ರಚಾರ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಧರ್ಮ, ಜಾತಿಯನ್ನು ತೇಜೊವಧೆ ಮಾಡಬಾರದು ಎಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು. ಬೆಳಿಗ್ಗೆ 6 ರಿಂದ ರಾತ್ರಿ 10 ರ ವರೆಗೆ ಚುನಾವಣೆಯ ಪ್ರಚಾರಕ್ಕೆ ಅವಕಾಶವಿದೆ. ಪಕ್ಷದ ಪ್ರತಿನಿಧಿಗಳು ಮತರಾರರ ಪಟ್ಟಿಯನ್ನು ಪರಿಶೀಲನೆ ಮಾಡಿಕೊಳ್ಳಬೇಕು ಹಾಗೂ ಏಪ್ರಿಲ್ 9 ರವರೆಗೆ ಓಟರ್ ಐಡಿ ಮಾಡಿಸಲು ಅವಕಾಶವಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದರು.

<><><>

**ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳು ಸಭೆ** ಸಮಾರಂಭ ಸೇರಿದಂತೆ ಮತ್ತಿತರ ಚಟುವಟಿಕೆಗಳನ್ನು ನಡೆಸಲು ಸುವಿಧಾ ತಂತ್ರಾಂಶದ ಮೂಲಕ ಅನುಮತಿ ಪಡೆಯಬೇಕೆಂದು **ಉಡುಪಿ** ಜಿಲ್ಲಾ ಚುನಾವಣಾ ಅಧಿಕಾರಿ ಹಾಗೂ ಜಿಲ್ಲಾಧಿಕಾರಿ ವಿದ್ಯಾ ಕುಮಾರಿ .ಕೆ ತಿಳಿಸಿದ್ದಾರೆ. ರಾಜಕೀಯ ಪಕ್ಷಗಳ ಮುಖಂಡರ ಹಾಗೂ ಮುದ್ರಕರು ಮತ್ತು ಪ್ರಕಾಶಕರ ಮಾಲೀಕರರೂಂದಿಗೆ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ಸಾರ್ವಜನಿಕ ಸಭೆ, ಸಮಾರಂಭ, ರ್ಯಾಲಿ ನಡೆಸಲು, ಸಂಚಾರಿ ವಾಹನ, ಧ್ವನಿವರ್ಧಕ, ಹೆಲಿಕಾಪ್ಟರ್ ಹಾಗೂ ಹೆಲಿಪ್ಯಾಡ್ ಅನುಮತಿ ಸೇರಿದಂತೆ ಇನ್ನಿತರೆ ಕಾರ್ಯ ಚಟುವಟಿಕೆಗಳಿಗೆ ಸುವಿಧಾ ತಂತ್ರಾಂಶ ಮೂಲಕವೇ ಅನುಮತಿ ಪಡೆಯಬೇಕೆಂದರು.

<><><>

**ಲೋಕಸಭಾ ಸಾರ್ವತ್ರಿಕ ಚುನಾವಣೆ ಘೋ ಣೆಯಾದ ಹಿನ್ನೆಲೆ: ಯಾದಗಿರಿ ಜಿಲ್ಲೆಯ** ಸುರಪುರ ತಾಲ್ಲೂಕಿನ ಕೆಂಭಾವಿ ಸಮೀಪ ಮಲ್ಲಾ ಕ್ರಾಸ್ ಬಳಿ ಸ್ಥಾಪಿಸಿರುವ ಚೆಕ್ ಪೋಸ್ಟ್‌ಗಳಿಗೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚೆಕ್‌ಪೋಸ್ಟ್‌ನಲ್ಲಿ ಕಾರ್ಯ ನಿರ್ವಹಿಸುವ ಎಲ್ಲ ಅಧಿಕಾರಿಗಳು ಅತ್ಯಂತ ಜಾಗರೂಕರಾಗಿರಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು. ಕೆಂಭಾವಿ ಸಮೀಪ ಮಲ್ಲಾ ಕ್ರಾಸ್ ಬಳಿ ಸ್ಥಾಪಿಸಿರುವ ಚೆಕ್ ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಈ ವಲಯ ವ್ಯಾಪ್ತಿಯಲ್ಲಿ ಮಲ್ಲಾ ಮತ್ತು ತಳ್ಳಳ್ಳಿ ಬಿ. ಗ್ರಾಮದ ಕ್ರಾಸ್ ಬಳಿ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ. ನೆರೆಯ ವಿಜಯಪುರ ಜಿಲ್ಲೆಯಿಂದ ನಮ್ಮ ಜಿಲ್ಲೆಗೆ ಬರುವ ಮತ್ತು ನಮ್ಮ ಜಿಲ್ಲೆಯಿಂದ ಹೊರಗೆ ಹೋಗುವ ಪ್ರತಿಯೊಂದು ವಾಹನಗಳನ್ನು ತಪಾಸಣೆ ಮಾಡಬೇಕು. ಬಸ್ಸಿನಲ್ಲಿ ಪ್ರಯಾಣಿಸುವ ವ್ಯಕ್ತಿಗಳನ್ನು ತಪಾಸಿಸಬೇಕು ಎಂದು ಅವರು ಚೆಕ್‌ಪೋಸ್ಟ್ ಸಿಬ್ಬಂದಿಗೆ ಸೂಚಿಸಿದರು. ಲೋಕಸಭಾ ಚುನಾವಣೆಯ ಘೋ ಣೆಯೊಂದಿಗೆ ಮಾದರಿ ನೀತಿ ಸಂಹಿತೆ ಜಾರಿಯಾಗಿದ್ದು, ಪ್ರಯಾಣಿಸುವ ವ್ಯಕ್ತಿಯ ಬಳಿ ಗರಿ ್ಠ 50 ಸಾವಿರ ರೂಪಾಯಿ ತನಕ ಜೊತೆಯಲ್ಲಿ ಕೊಂಡೊಯ್ಯಲು ಅವಕಾಶವಿದೆ. ಅದಕ್ಕೂ ಮೀರಿ ಹಣ ಕೊಂಡೊಯ್ಯುತ್ತಿದ್ದರೆ ಸೂಕ್ತ ದಾಖಲಾತಿ ತೋರಿಸಬೇಕು. ದಾಖಲಾತಿ ಇಲ್ಲದೆ ಹಣ ಸಾಗಿಸುತ್ತಿದ್ದರೆ ಅಂಥವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

<><><>

**ಲೋಕಸಭಾ ಚುನಾವಣೆ-2024 ರ ಹಿನ್ನೆಲೆ: ಉತ್ತರ ಕನ್ನಡ ಜಿಲ್ಲೆಯ** ಮುಂಡಗೋಡದಲ್ಲಿ ಸ್ವೀಪ್ ಸಮಿತಿ ವತಿಯಿಂದ ಸಾರ್ವಜನಿರಿಗೆ ಮತದಾನದ ಅರಿವು ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅಂತಾರಾಷ್ಟ್ರೀಯ ಕ್ರೀಡಾಪಟು ಹಾಗೂ ಚುನಾವಣಾ ರಾಯಭಾರಿ ಬಿನ್ನಿ ಜೋಸೆಫ್, ದೇಶದ ಅಭಿವೃದ್ಧಿಗೆ ಪೂರಕವಾಗಿ 18 ಮೇಲ್ಪಟ್ಟ ನಾಗರೀಕರು ಸ್ವಯಂ ಪ್ರೇರಣೆಯಿಂದ ಮತದಾನ ಮಾಡಬೇಕು. ದೇಶದ ಸರ್ವಾಂಗೀಣ ಅಭಿವೃದ್ಧಿ ದೃಷ್ಟಿಯಿಂದ ಮತದಾನ ಮಹತ್ವದ ಪಾತ್ರ ವಹಿಸುತ್ತದೆ.

ಹೀಗಾಗಿ ಪ್ರತಿಯೊಬ್ಬರೂ ಯಾವುದೇ ಆಮಿ ’ ಹಾಗೂ ಪ್ರಭಾವಕ್ಕೆ ಒಳಗಾಗದೇ ಮತದಾನ ಮಾಡಬೇಕು. ತಮ್ಮ ಸುತ್ತಮುತ್ತಲಿನ ಜನರಿಗೂ ಕಡ್ಡಾಯವಾಗಿ ಮತದಾನದ ಹಕ್ಕನ್ನು ಚಲಾಯಿಸಲು ಪ್ರೇರೆಪಿಸಬೇಕು ಎಂದರು.

<><><>

**ಸುಪ್ರೀಂ ಕೋರ್ಟ್ ಚುನಾವಣಾ ಬಾಂಡ್‌ಗಳಿಗೆ ಸಂಬಂಧಿಸಿದ ಎಲ್ಲಾ ವಿವರಗಳನ್ನು** ಸಂಪೂರ್ಣವಾಗಿ ಇದೇ 21ರೊಳಗೆ ಬಹಿರಂಗಪಡಿಸಬೇಕು ಎಂದು ಭಾರತೀಯ ಸ್ಟೇಟ್ ಬ್ಯಾಂಕ್‌ಗೆ ನಿರ್ದೇಶಿಸಿದೆ. ಚುನಾವಣಾ ಬಾಂಡ್ ಖರೀದಿದಾರ ಮತ್ತು ಸ್ವೀಕರಿಸುವ ರಾಜಕೀಯ ಪಕ್ಷಗಳ ನಡುವಿನ ಸಂಬಂಧವನ್ನು ಬಹಿರಂಗಪಡಿಸುವ ವಿಶಿಷ್ಟ ಬಾಂಡ್ ಸಂಖ್ಯೆಗಳು ಸೇರಿದಂತೆ ಚುನಾವಣಾ ಬಾಂಡ್‌ಗಳಿಗೆ ಸಂಬಂಧಿಸಿದ ಎಲ್ಲಾ ವಿವರಗಳನ್ನು ಬಹಿರಂಗ ಪಡಿಸುವಂತೆ ಸುಪ್ರೀಂಕೋರ್ಟ್ ನಿನ್ನೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾಗೆ ಸೂಚಿಸಿದೆ. ಐವರು ನ್ಯಾಯಾಧೀಶರನ್ನೊಳಗೊಂಡ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಸಾಂವಿಧಾನಿಕ ಪೀಠ; ಎಸ್‌ಬಿಐ ಬಾಂಡ್‌ಗಳ ಸಂಪೂರ್ಣ ವಿವರಗಳನ್ನು ಬಹಿರಂಗಪಡಿಸುವ ಅಗತ್ಯವಿದೆ ಎಂದು ಹೇಳಿದೆ. ಬ್ಯಾಂಕ್ ಎಲ್ಲಾ ವಿವರಗಳನ್ನು ಬಹಿರಂಗಪಡಿಸಿದೆ. ಎನ್ನುವಅಂಶವನ್ನು ಒಳಗೊಂಡ ಅಫಿಡವಿಟ್ ಅನ್ನು ಇದೇ 21ರಂದು ಸಂಜೆ 5 ರೊಳಗೆ ಸಲ್ಲಿಸುವಂತೆ ಸುಪ್ರಿಂಕೋರ್ಟ್ ಎಸ್‌ಬಿಐ ಅಧ್ಯಕ್ಷರಿಗೆ ನಿರ್ದೇಶಿಸಿದೆ.

<><><>